# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಸಿ.ಟಿ ರವಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1218 |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೊಳಚೆ ಮಂಡಳಿ ರಚನೆ ಆಗಿದ್ದು ಯಾವಾಗ; ಕೊಳಚೆ ಅಭಿವೃದ್ಧಿ ಮಂಡಳಿ ರಚನೆಯ ಉದ್ದೇಶವೇನು; ಮಂಡಳಿ ರಚನೆಯ ಉದ್ದೇಶ ಈಡೇರಿದೆಯೇ; | ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯು 1975 ರಲ್ಲಿ ಸ್ಥಾಪನೆಯಾಗಿರುತ್ತದೆ. ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ನಿವಾಸಿಗಳಿಗೆ ವಸತಿ ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಅವರಲ್ಲಿ ಸಾಮಾಜಿಕ ಅರಿವು ಮೂಡಿಸಿ, ಅವರ ಜೀವನ ಮಟ್ಟವನ್ನು ಹೆಚ್ಚಿಸುವುದು ಮಂಡಳಿಯ ಉದ್ದೇಶವಾಗಿರುತ್ತದೆ.<br><br>ಸರ್ಕಾರವು ಆಯವ್ಯಯದಲ್ಲಿ ಕೊಳಗೇರಿ ಸುಧಾರಣೆ ಯೋಜನೆಯಡಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಘೋಷಿತ ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ಮೂಲಭೂತ ಸೌಲಭ್ಯ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪ, ಸಮುದಾಯ ಶೌಚಾಲಯ ಹಾಗೂ ಸಮುದಾಯ ಭವನ ಮುಂತಾದ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೆತ್ತಿಕೊಂಡು ಹಂತ-ಹಂತವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. |
| ಆ | ರಾಜ್ಯದಲ್ಲಿರುವ ಕೊಳಚೆ ಪ್ರದೇಶಗಳ ಒಟ್ಟು ಸಂಖ್ಯೆ ಎಷ್ಟು; ಈ ಕೊಳಚೆ ಪ್ರದೇಶಗಳಲ್ಲಿ ಎಷ್ಟು ಜನ ವಾಸ ಮಾಡುತ್ತಿದ್ದಾರೆ; ಎಷ್ಟು ಜನರಿಗೆ ಹಕ್ಕುಪತ್ರ ನೀಡಲಾಗಿದೆ; | ರಾಜ್ಯದಲ್ಲಿ ಒಟ್ಟು 3025 ಕೊಳಚೆ ಪ್ರದೇಶಗಳನ್ನು ಗುರುತಿಸಲಾಗಿದ್ದು, ಅವುಗಳ ಪೈಕಿ 2866 ಕೊಳಗೇರಿ ಪ್ರದೇಶಗಳನ್ನು ಮಂಡಳಿ ಕಾಯ್ದೆಯಡಿ ಘೋಷಿಸಲಾಗಿರುತ್ತದೆ.<br><br>ಈ ಕೊಳಗೇರಿ ಪ್ರದೇಶಗಳಲ್ಲಿ ಸುಮಾರು 40.50 ಲಕ್ಷಗಳ ಜನರು ವಾಸಿಸುತ್ತಿದ್ದು, ಇವುಗಳ ಪೈಕಿ ಸರ್ಕಾರಿ ಮತ್ತು ಸ್ಥಳೀಯ ಸಂಸ್ಥೆಗಳ ಮಾಲೀಕತ್ವದಲ್ಲಿರುವ ಘೋಷಿತ ಕೊಳಗೇರಿ ಪ್ರದೇಶಗಳಲ್ಲಿನ 79,457 ಕುಟುಂಬಗಳಿಗೆ ಮಂಡಳಿ ವತಿಯಿಂದ ಮತ್ತು ಸ್ಥಳೀಯ ಸಂಸ್ಥೆಗಳಿಂದ / ಇತರೆ ಇಲಾಖೆಗಳಿಂದ 87,410 ಕುಟುಂಬಗಳಿಗೆ ಒಟ್ಟಾರೆಯಾಗಿ 1,66,867 ಹಕ್ಕುಪತ್ರಗಳನ್ನು ವಿತರಿಸಲಾಗಿದೆ. |
| ಇ | ವಾಸಯೋಗ್ಯವಲ್ಲದ ಕೊಳಗೇರಿಗಳು ಎಷ್ಟು; ಎಷ್ಟು ಸ್ಲಂಗಳನ್ನು ಕೊಳಗೇರಿ ಮುಕ್ತ ಆಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) ವಾಸಯೋಗ್ಯವಲ್ಲದ ಕೊಳಗೇರಿಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಲು ಸರ್ಕಾರ ಕ್ರಮಕೈಗೊಳ್ಳುವುದೇ; | ವಾಸಕ್ಕೆ ಯೋಗ್ಯವಲ್ಲದ ಕೊಳಗೇರಿ ಪ್ರದೇಶಗಳನ್ನು ಗುರುತಿಸಿ, ಮಂಡಳಿ ಕಾಯ್ದೆಯಡಿ ಘೋಷಿಸಿ, ಅಗತ್ಯ ಮೂಲಭೂತ ಸೌಕರ್ಯ ಒದಗಿಸಿ, ಸಮಗ್ರವಾದ ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುತ್ತಿದೆ. ಅದರಂತೆ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 39 ಕೊಳಗೇರಿ ಪ್ರದೇಶಗಳನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಿ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗಿರುತ್ತದೆ. ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.<br><br>**ಕೊಳಗೇರಿ ಸುಧಾರಣೆ ಯೋಜನೆ:-**<br><br>ರಾಜ್ಯದ್ಯಾಂತ ಬರುವ ಘೋಷಿತ ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ಸರ್ಕಾರವು ಆಯವ್ಯಯದಲ್ಲಿ ಕೊಳಗೇರಿ ಸುಧಾರಣೆ ಯೋಜನೆಯಡಿ ಆಯವ್ಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ |

<table>
<tr>
<td></td>
<td></td>
<td>ಮೂಲಭೂತ ಸೌಲಭ್ಯ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿದೀಪ, ಸಮುದಾಯ ಶೌಚಾಲಯ ಹಾಗೂ ಸಮುದಾಯ ಭವನ ಮುಂತಾದ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗುತ್ತಿದೆ.</td>
</tr>
<tr>
<td>ಈ</td>
<td>ಕಳೆದ 3 ವರ್ಷಗಳಿಂದ ಕೊಳಚೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಸದರಿ ಅನುದಾನದಲ್ಲಿ ಎಷ್ಟು ವೆಚ್ಚವಾಗಿದೆ; ಯಾವ ಉದ್ದೇಶಕ್ಕಾಗಿ ಅನುದಾನ ವೆಚ್ಚ ಆಗಿದೆ; (ವರ್ಷವಾರು ಸಂಪೂರ್ಣ ಸಮಗ್ರ ಮಾಹಿತಿ ನೀಡುವುದು)</td>
<td>ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಕಳೆದ 03 ವರ್ಷಗಳಿಂದ ಕೊಳಚೆ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯ ಕಾಮಗಾರಿಗಳನ್ನು ಕೈಗೊಳ್ಳಲು ಕೊಳಗೇರಿ ಸುಧಾರಣೆ ಯೋಜನೆಯಡಿ ಬಿಡುಗಡೆಯಾದ, ವೆಚ್ಚವಾಗಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ.
<table>
<tr><th>ಕ್ರಮ ಸಂಖ್ಯೆ</th><th>ವರ್ಷ</th><th>ಅನುಮೋದನೆಗೊಂಡ ಮೊತ್ತ (ರೂ. ಕೋಟಿಗಳಲ್ಲಿ)</th><th>ಖರ್ಚಾದ ಮೊತ್ತ ರೂ. ಕೋಟಿಗಳಲ್ಲಿ</th></tr>
<tr><td>1</td><td>2022-23</td><td>84.00</td><td>84.00</td></tr>
<tr><td>2</td><td>2023-24</td><td>33.50</td><td>33.50</td></tr>
<tr><td>3</td><td>2024-25</td><td>26.11</td><td>24.20</td></tr>
</table>
ಸದರಿ ಅನುದಾನವನ್ನು ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ಮೂಲಭೂತ ಸೌಲಭ್ಯ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪ, ಸಮುದಾಯ ಶೌಚಾಲಯ ಹಾಗೂ ಸಮುದಾಯ ಭವನಗಳನ್ನು ಕಾಮಗಾರಿಗಳನ್ನು ಕೈಗೊಳ್ಳಲು ಉಪಯೋಗಿಸಿಕೊಳ್ಳಲಾಗಿರುತ್ತದೆ.</td>
</tr>
<tr>
<td>ಉ</td>
<td>ರಾಜ್ಯವನ್ನು ಕೊಳಗೇರಿ ಮುಕ್ತಗೊಳಿಸಲು ಹಾಗೂ ಬಾಕಿ ಉಳಿದಿರುವ ಕೊಳಗೇರಿಗಳಲ್ಲಿ ಹಕ್ಕುಪತ್ರ ನೀಡಲು ಯಾವ ಕ್ರಮಕೈಗೊಳ್ಳಲಾಗಿದೆ?</td>
<td>ರಾಜ್ಯವನ್ನು ಕೊಳಗೇರಿ ಮುಕ್ತಗೊಳಿಸಲು ಸರ್ಕಾರವು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಆಯವ್ಯಯದಲ್ಲಿ ಕೊಳಗೇರಿ ಸುಧಾರಣೆ ಯೋಜನೆಯಡಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಹಾಗೂ ಮನೆಗಳ ನಿರ್ಮಾಣಕ್ಕೆ ಸರ್ಕಾರವು ನಿಗಧಿಪಡಿಸುವ ಗುರಿಗಳಿಗೆ ಅನುಗುಣವಾಗಿ ಹಂತ-ಹಂತವಾಗಿ ವಸತಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆ.
<br><br>
ವಸತಿ ಯೋಜನೆ :-
<br><br>
ರಾಜ್ಯವನ್ನು ಕೊಳಗೇರಿ ಮುಕ್ತಗೊಳಿಸಲು ಮಂಡಳಿ ವತಿಯಿಂದ ಕೇಂದ್ರ ಪುರಸ್ಕೃತ ವಿವಿಧ ವಸತಿ ಯೋಜನೆಗಳಾದ ನರ್ಮ್-ಬಿ.ಎಸ್.ಯು.ಪಿ. / ಐ.ಹೆಚ್.ಎಸ್.ಡಿ.ಪಿ ಮತ್ತು ರಾಜೀವ್ ಆವಾಸ ಯೋಜನೆಯಡಿ ಆಯ್ದ ಕೊಳಗೇರಿ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳೊಂದಿಗೆ ವಸತಿ ಕಲ್ಪಿಸಿ, ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿರುತ್ತದೆ. ವಿವರಗಳು ಈ ಕೆಳಕಂಡತಿವೆ.
<table>
<tr><th>ಕ್ರ.ಸಂ</th><th>ಯೋಜನೆ</th><th>ನಿರ್ಮಿಸಿರುವ ಮನೆಗಳ ಸಂಖ್ಯೆ</th><th>ಹಂಚಿಕೆ ಮಾಡಿರುವ ಮನೆಗಳ ಸಂಖಯೆ</th><th>ಕೊಳಗೇರಿ ಪ್ರದೇಶಗಳ ಸಂಖ್ಯೆ</th></tr>
<tr><td>1</td><td>ಬಿ.ಎಸ್.ಯು.ಪಿ</td><td>23315</td><td>23315</td><td>133</td></tr>
<tr><td>2</td><td>ಐ.ಹೆಚ್.ಎಸ್.ಡಿ.ಪಿ</td><td>17237</td><td>17237</td><td>172</td></tr>
<tr><td>3</td><td>ರಾಜೀವ್ ಆವಾಸ ಯೋಜನೆ</td><td>19897</td><td>19181</td><td>77</td></tr>
</table>
ಮುಂದುವರೆದಂತೆ, 2015-16ನೇ ಸಾಲಿನಿಂದ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ ಯೋಜನೆಯನ್ನು ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಡಾ|| ಬಿ.ಆರ್.ಅಂಬೇಡ್ಕರ ನಿವಾಸ ಯೋಜನೆ</td>
</tr>
</table>

| | | |
|---|---|---|
| | | ಮತ್ತು ವಾಜಪೇಯಿ ನಗರ ವಸತಿ ಯೋಜನೆಯನ್ನು ಸಂಯೋಜನೆಗೊಳಿಸಿ, ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಯೋಜನೆಯಡಿ 1,80,253 ಮನೆಗಳು ಮಂಜೂರಾಗಿದ್ದು, ಅವುಗಳ ಅನುಷ್ಠಾನ ಈ ಕೆಳಕಂಡಂತಿವೆ.<br><br>• ಅದರಂತೆ, ಸದರಿ ಯೋಜನೆಯಡಿ 1,27,913 ಮನೆಗಳನ್ನು ಪ್ರಾರಂಭಿಸಲಾಗಿದ್ದು ಈ ಪೈಕಿ 86,651 ಮನೆಗಳ ನಿರ್ಮಾಣ ಪೂರ್ಣಗೊಂಡಿದ್ದು, ಉಳಿದ 41,262 ಮನೆಗಳ ನಿರ್ಮಾಣ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತದೆ.<br>• ಪ್ರಥಮ ಹಂತದಲ್ಲಿ 36,789 ಮನೆಗಳನ್ನು ಮಾರ್ಚ್ 2024 ರಲ್ಲಿ ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿದೆ.<br>• 2ನೇ ಹಂತದಲ್ಲಿ 42,345 ಮನೆಗಳನ್ನು ಡಿಸೆಂಬರ್ 2025ರ ಅಂತ್ಯಕ್ಕೆ ಹಂಚಿಕೆ ಮಾಡಲು ಉದ್ದೇಶಿಸಲಾಗಿರುತ್ತದೆ.<br>• ಉಳಿದ ಪೂರ್ಣಗೊಂಡಿರುವ / ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸಿ 3ನೇ ಹಂತದಲ್ಲಿ ಹಂಚಿಕೆ ಮಾಡಲು ಉದ್ದೇಶಿಸಲಾಗಿದೆ.<br><br>ಸರ್ಕಾರಿ ಮತ್ತು ಸ್ಥಳೀಯ ಸಂಸ್ಥೆಗಳ ಮಾಲೀಕತ್ವದಲ್ಲಿರುವ ಘೋಷಿತ ಕೊಳಚೆ ಪ್ರದೇಶಗಳಲ್ಲಿ ವಾಸಿಸುತ್ತಿರುವ ನಿವಾಸಿಗಳ ಸಮೀಕ್ಷೆ ಕಾರ್ಯಕೈಗೊಂಡು ಡಿಸೆಂಬರ್ 2025 ರ ಅಂತ್ಯಕ್ಕೆ ಸನ್ಮಾನ್ಯ ಮುಖ್ಯಮಂತ್ರಿಗಳವರಿಂದ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ 20,394 ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಿಸಲು ಉದ್ದೇಶಿಸಲಾಗಿದೆ. |

ಸಂಖ್ಯೆ: ವಇ 90 ಎಸ್‌ಬಿಎಂ 2025

(ಬಿ.ಝಡ್. ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು